**Akashvani : Bangalore**
**Regional Bulletin In Kannada**
**12.01.2026 / 2.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**12.01.2026 / 2.30 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಬೆಂಗಳೂರಿನ ಐದು ಪಾಲಿಕೆಗಳಿಗೆ ಜೂನ್ ೩೦ರೊಳಗೆ ಚುನಾವಣೆ ನಡೆಸುವಂತೆ ಸುಪ್ರೀಂಕೋರ್ಟ್ ನಿರ್ದೇಶನ**

**೨. ದ್ವೇಷ ಭಾಷಣ ಮಸೂದೆ ಪರಿಶೀಲಿಸುವಂತೆ ರಾಜ್ಯಪಾಲರಿಗೆ ಬಿಜೆಪಿ ನಿಯೋಗ ಮನವಿ**

**೩. ಜರ್ಮನಿ ಚಾನ್ಸೆಲರ್ ಫ್ರೆಡ್ರಿಕ್ ಮೆರ್ಜ್ ನಾಳೆ ಬೆಂಗಳೂರಿನ ಬಾಷ್ ಆವಿಷ್ಕಾರ ಹಾಗೂ ತಯಾರಿಕಾ ಘಟಕಕ್ಕೆ ಭೇಟಿ**

**೪. ಕರ್ನಾಟಕ ಚಲನಚಿತ್ರ ಪೋಷಕ ಕಲಾವಿದರ ಸಂಘಕ್ಕೆ ಒಕ್ಕೂಟದ ಮಾನ್ಯತೆ**

**೫. ಮೂಡಬಿದಿರೆ ಅಂತರ್ ವಿಶ್ವವಿದ್ಯಾಲಯ ಅಥ್ಲೆಟಿಕ್ ಚಾಂಪಿಯನ್‌ಶಿಪ್; ಹತ್ತು ಸಾವಿರ ಮೀಟರ್ ಓಟದಲ್ಲಿ ಕರ್ನಾಟಕಕ್ಕೆ ಚಿನ್ನ**

**<><*<><>*><>**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಚುನಾವಣೆ ಕುರಿತಂತೆ ಸುಪ್ರೀಂಕೋರ್ಟ್ ಇಂದು ಮಹತ್ವದ ಆದೇಶ ನೀಡಿದೆ. ಐದು ನಗರಪಾಲಿಕೆಗಳಿಗೆ ಜೂನ್ ೩೦ರೊಳಗೆ ಚುನಾವಣೆ ನಡೆಸುವಂತೆ ರಾಜ್ಯ ಸರ್ಕಾರ ಮತ್ತು ಚುನಾವಣಾ ಆಯೋಗಕ್ಕೆ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ಪೀಠ ನಿರ್ದೇಶನ ನೀಡಿದೆ. ಚುನಾವಣೆಗೆ ಸಂಬಂಧಿಸಿದಂತೆ ಲಿಖಿತ ದಾಖಲೆಯನ್ನು ಸಲ್ಲಿಸುವಂತೆ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಜೋಯ್ ಮಾಲ್ಯ ಬಾಗ್ಚಿ ಅವರಿದ್ದ ಪೀಠವು, ಹಿರಿಯ ವಕೀಲ ಅಭಿಷೇಕ್ ಮನು ಸಿಂಗ್ವಿ ಹಾಗೂ ಅಡ್ವಕೇಟ್ ಜನರಲ್ ಶಶಿಕಿರಣ್ ಶೆಟ್ಟಿಯವರಿಗೆ ಸೂಚಿಸಿತ್ತು. ಇಂದು ನಡೆದ ವಿಚಾರಣೆಯ ವೇಳೆ, ಸರ್ಕಾರದ ಹಿರಿಯ ವಕೀಲ ಅಭಿಷೇಕ್ ಸಿಂಗ್ವಿ ವಾದ ಮಂಡಿಸಿ, ಈಗಾಗಲೇ ಮೀಸಲಾತಿಯ ಕರಡು ಅಧಿಸೂಚನೆ ಹೊರಡಿಸಲಾಗಿದೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು. ಫೆಬ್ರವರಿ ೨೦ರೊಳಗೆ ಅಂತಿಮ ಮೀಸಲಾತಿ ಅಧಿಸೂಚನೆ ಹೊರಡಿಸುವಂತೆ ಸುಪ್ರೀಂಕೋರ್ಟ್ ಸೂಚನೆ ನೀಡಿದೆ.

**<><*<><>*><>**

ದ್ವೇಷ ಭಾಷಣ ಪ್ರತಿಬಂಧಕ ಮಸೂದೆಯನ್ನು ಪರಿಶೀಲಿಸುವಂತೆ ಬಿಜೆಪಿ ನಿಯೋಗ ಇಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಮನವಿ ಸಲ್ಲಿಸಿತು. ಪ್ರತಿಪಕ್ಷ ನಾಯಕ ಆರ್.ಅಶೋಕ ನೇತೃತ್ವದ ನಿಯೋಗ ಬಳ್ಳಾರಿ ಗಲಭೆ ಪ್ರಕರಣ, ಕೋಗಿಲು ಪ್ರಕರಣ ಸೇರಿದಂತೆ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿದೆ ಎಂದು ರಾಜ್ಯಪಾಲರ ಗಮನ ಸೆಳೆಯಿತು. Gಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಸರ್ಕಾರ ವಿಧಾನಸಭೆಯಲ್ಲಿ ದ್ವೇಷ ಭಾಷಣ ಪ್ರತಿಬಂಧಕ ಮಸೂದೆ ಕುರಿತಂತೆ ಚರ್ಚೆಗೆ ಅವಕಾಶ ನೀಡಿಲ್ಲ ಎಂದು ದೂರಿದ್ದಾರೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ ಎಂದು ಆರೋಪಿಸಿದ್ದಾರೆ.

<><*<><>*><>

ಜರ್ಮನಿಯ ಫೆಡರಲ್ ಚಾನ್ಸೆಲರ್ ಫ್ರಿಡ್ರಿಕ್ ಮೆರ್ಜ್ ಭಾರತ ಪ್ರವಾಸ ಕೈಗೊಂಡಿದ್ದು, ಇಂದು ಅವರು ಮೊದಲ ಹಂತದಲ್ಲಿ ಗುಜರಾತ್‌ನ ಸಬರಮತಿ ಆಶ್ರಮಕ್ಕೆ ಭೇಟಿ ನೀಡಿ, ಮಹಾತ್ಮಾಗಾಂಧಿಜಿ ಪ್ರತಿಮೆಗೆ ಗೌರವ ಸಮರ್ಪಣೆ ಸಲ್ಲಿಸಿದರು. ನಾಳೆ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್, ಬೆಂಗಳೂರಿನ ಆಡುಗೋಡಿಯಲ್ಲಿರುವ ಭಾರತ-ಜರ್ಮನಿ ಸಹಯೋಗದ ಬಾಷ್ ಆವಿಷ್ಕಾರ ಮತ್ತು ತಯಾರಿಕಾ ಘಟಕಕ್ಕೆ ಭೇಟಿ ನೀಡಲಿದ್ದಾರೆ.

<><*<><>*><>

ಕರ್ನಾಟಕ ಚಲನಚಿತ್ರ ಪೋಷಕ ಕಲಾವಿದರ ಸಂಘದ ಸರ್ವಸದಸ್ಯರ ಸಭೆ ಬೆಂಗಳೂರಿನಲ್ಲಿಂದು ನಡೆಯಿತು. ಸಭೆಯಲ್ಲಿ ಸಂಘದ ಅಧ್ಯಕ್ಷ ಸೋಮಶೇಖರ್ ಮಾತನಾಡಿ, ಪದ್ಮಿನಿ ನಂದಾ ನೇತೃತ್ವದ ಚಲನಚಿತ್ರ ಪೋಷಕ ಕಲಾವಿದರ ಸಂಘದ ಸದಸ್ಯರಿಗೆ ಒಕ್ಕೂಟದ ಗೌರವ ಸದಸ್ಯತ್ವ ನೀಡುವ ವಿಷಯವನ್ನು ಒಕ್ಕೂಟ ಸಭೆಯಲ್ಲಿ ಅನುಮೋದಿಸಲಾಗಿದೆ ಎಂದು ಘೋಷಿಸಿದರು. ಸಭೆಯಲ್ಲಿ ಪೋಷಕ ನಟರಾದ ರವಿಶಂಕರ್, ಹಿರಿಯ ಕಲಾವಿದರಾದ ಮಾಲತಿ ಸುಧೀರ್, ಮೈಸೂರು ರಮಾನಂದ್, ಮಿತ್ರ ಸೇರಿದಂತೆ ಹಲವು ಕಲಾವಿದರು ಉಪಸ್ಥಿತರಿದ್ದರು.

<><*<><>*><>

ಇಂದು ಸ್ವಾಮಿ ವಿವೇಕಾನಂದರ ೧೬೩ನೇ ಜಯಂತಿ. ಈ ಹಿನ್ನೆಲೆಯಲ್ಲಿ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವತಿಯಿಂದ ಸೆಂಟ್ರಲ್ ಕಾಲೇಜಿನ ರಾಜಾಜಿ ಹಾಲ್‌ನಲ್ಲಿ ರಾಷ್ಟ್ರೀಯ ಯುವ ದಿನಾಚರಣೆ ಏರ್ಪಡಿಸಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕುಲಪತಿ ಪ್ರೊ.ರಮೇಶ್.ಬಿ. ಅವರು, ಸ್ವಾಮಿ ವಿವೇಕಾನಂದರ ಶಿಕ್ಷಣದ ಪರಿಕಲ್ಪನೆ ವಿಶ್ವವಿದ್ಯಾಲಯಗಳಿಗೆ ಇಂದಿಗೂ ಮಾದರಿಯಾಗಿದೆ ಎಂದು ತಿಳಿಸಿದ್ದಾರೆ. ಶಿಕ್ಷಣ ವ್ಯವಸ್ಥೆ ಕೇವಲ ಮಾಹಿತಿ ಸಂಗ್ರಹ ಮತ್ತು ಉದ್ಯೋಗ ಗಳಿಕೆಗೆ ಸೀಮಿತವಾಗದೆ ಮಾನವ ಸಾಮರ್ಥ್ಯ, ಅಭಿವೃದ್ಧಿ ಹಾಗೂ ವ್ಯಕ್ತಿತ್ವ ನಿರ್ಮಾಣಕ್ಕೆ ಪೂರಕವಾದ ಸಾಧನವಾಗಬೇಕೆಂಬ ವಿವೇಕಾನಂದರ ಆಶಯ ಅತ್ಯಂತ ಪ್ರಸ್ತುತ ಎಂದು ಪ್ರತಿಪಾದಿಸಿದ್ದಾರೆ.

<><*<><>*><>

ಲಕ್ಷಾಂತರ ರೈತರ ಜೀವನಾಡಿಯಾಗಿರುವ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟ್‌ಗಳ ಅಳವಡಿಕೆ ಕಾರ್ಯ ನಡೆಯುತ್ತಿದ್ದು, ಅವುಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಿ ರೈತರಿಗೆ ಅನುಕೂಲ ಮಾಡಿಕೊಡಲಾಗುವುದು ಎಂದು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ಎಸ್.ತಂಗಡಗಿ ತಿಳಿಸಿದ್ದಾರೆ. ನೂತನ ಕ್ರಸ್ಟ್ ಗೇಟಗಳ ಅಳವಡಿಕೆ ಕಾರ್ಯ ಪರಿಶೀಲಿಸಿದ ಬಳಿಕ ಮಾತನಾಡಿದ ಅವರು, ಗೇಟ್ ಸಂಖ್ಯೆ ೧೮ರ ಕೆಲಸವು ಪೂರ್ಣಗೊಂಡಿದೆ. ಕ್ರಸ್ಟ್ ಗೇಟಗಳ ಎರೆಕ್ಷನ್ ಮತ್ತು ಡಿಸ್‌ಮೆಟಲಿಂಗ್ ಕಾರ್ಯಕ್ಕೆ ತಲಾ ಎರಡು ತಂಡಗಳು ಕಾರ್ಯನಿರ್ವಹಿಸುತ್ತಿವೆ. ಗೇಟ್ ಸಂಖ್ಯೆ ೧೫ರ ಕೆಲಸ ಪೂರ್ಣಗೊಳ್ಳುವ ಹಂತದಲ್ಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದಿರೆಯ ಸ್ವರಾಜ್ ಮೈದಾನದಲ್ಲಿ ೮೫ನೇ ಅಖಿಲ ಭಾರತ ಪುರುಷ ಹಾಗೂ ಮಹಿಳೆಯರ ಅಂತರ್‌ವಿಶ್ವವಿದ್ಯಾಲಯ ಅಥ್ಲೆಟಿಕ್ ಚಾಂಪಿಯನ್‌ಶಿಪ್‌ಗೆ ಚಾಲನೆ ದೊರೆತಿದೆ. ಮೊದಲ ದಿನವೇ ಕರ್ನಾಟಕಕ್ಕೆ ಮೊದಲ ಚಿನ್ನ ಲಭಿಸಿದೆ. ಮಹಿಳೆಯರ ವಿಭಾಗದ ೧೦ ಸಾವಿರ ಮೀಟರ್ ಓಟದಲ್ಲಿ ಮಂಗಳೂರು

ವಿಶ್ವವಿದ್ಯಾನಿಲಯದ ನಿರ್ಮಲಾ ೩೪:೪೭.೨೦ ನಿಮಿಷದಲ್ಲಿ ಗುರಿ ತಲುಪುವ ಮೂಲಕ ಚಿನ್ನದ ಪದಕಕ್ಕೆ ಕೊರಳೊಡ್ಡಿದ್ದಾರೆ. ಸಾವಿತ್ರಿ ಬಾಯಿ ಪುಲೆ ಪುಣೆ ವಿಶ್ವವಿದ್ಯಾಲಯದ ಗಾಯಕ್‌ವಾಡ್ ರವಿನಾ ವಿಜಯ್ ೩೪:೪೮.೦೭ ನಿಮಿಷದಲ್ಲಿ ಗುರಿ ತಲುಪುವ ಮೂಲಕ ಬೆಳ್ಳಿಪದಕವನ್ನು ಗೆದ್ದುಕೊಂಡಿದ್ದಾರೆ. ಬೆಂಗಳೂರಿನ ಲವ್ಲಿ ಪ್ರೊಫೆಷನಲ್ ವಿಶ್ವವಿದ್ಯಾಲಯದ ಅಂಜಲಾ ದೇವಿ ತೃತೀಯ ಸ್ಥಾನದದೊಂದಿಗೆ ಕಂಚಿನ ಪದಕ ತಮ್ಮದಾಗಿಸಿಕೊಂಡಿದ್ದಾರೆ. ಪುರುಷರ ವಿಭಾಗದ ೧೦ ಸಾವಿರ ಮೀಟರ್ ಓಟದಲ್ಲಿ ಬರೇಲಿಯ ಮಹಾತ್ಮ ಜ್ಯೋತಿಬಾ ಫುಲೆ ವಿಶ್ವವಿದ್ಯಾಲಯದ ಗೌರವ್ ಚಿನ್ನದ ಪದಕವನ್ನು ತಮ್ಮದಾಗಿಸಿಕೊಂಡಿದ್ದಾರೆ. ಸಂಜೆ ೫ ಗಂಟೆಗೆ ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಕ್ರೀಡಾಕೂಟಕ್ಕೆ ಅಧಿಕೃತವಾಗಿ ಚಾಲನೆ ನೀಡಲಿದ್ದಾರೆ. ದೇಶದ ೩೧೨ಕ್ಕೂ ಅಧಿಕ ವಿಶ್ವವಿದ್ಯಾಲಯಗಳ ೪ ಸಾವಿರ ೨೮೮ ಅಥ್ಲೀಟ್‌ಗಳು ಕ್ರೀಡಾಕೂಟದಲ್ಲಿ ಭಾಗವಹಿಸಿದ್ದಾರೆ.

**<><*<><>*><>**

ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಮೆಕ್ಕೆಜೋಳ ಉತ್ಪನ್ನ ಖರೀದಿ ಕುರಿತಂತೆ ಜಿಲ್ಲೆಯ ವಿವಿಧ ಎ.ಪಿ.ಎಂ.ಸಿ ಮಾರುಕಟ್ಟೆಗಳಲ್ಲಿ ಆಗುವ ವಹಿವಾಟಿನ ಧಾರಣೆಯ ಆಧಾರದ ಮೇಲೆ ರೈತರಿಗೆ ಬೆಲೆ ವ್ಯತ್ಯಾಸದ ಮೊತ್ತವನ್ನು ಡಿಬಿಟಿ ಮೂಲಕ ಪಾವತಿಸಲಾಗುವುದೆಂದು ಕೊಪ್ಪಳ ಕೃಷಿ ಮಾರಾಟ ಇಲಾಖೆ ಸಹಾಯಕ ನಿರ್ದೇಶಕ ವೀರಭದ್ರಯ್ಯ ಹಿರೇಮಠ ತಿಳಿಸಿದ್ದಾರೆ. ಮಾರುಕಟ್ಟೆ ಮಧ್ಯ ಪ್ರವೇಶದ ದರ ಪ್ರತಿ ಕ್ವಿಂಟಲ್‌ಗೆ ಗರಿಷ್ಠ ೨ ಸಾವಿರದ ೧೫೦ ರೂಪಾಯಿ ನಿಗದಿಪಡಿಸಿದೆ. ಪ್ರತಿ ಎಕರಗೆ ೧೨ ಕ್ವಿಂಟಲ್‌ನಂತೆ ಫ್ರೂಟ್ಸ್ ತಂತ್ರಾಂಶದಲ್ಲಿ ಲಭ್ಯವಾಗುವ ರೈತರು ಹೊಂದಿರುವ ಜಮೀನಿನ ವಿಸ್ತೀರ್ಣಕ್ಕನುಗುಣವಾಗಿ ಪ್ರತಿ ರೈತರಿಗೆ ಗರಿಷ್ಠ ೫೦ ಕ್ವಿಂಟಲ್‌ಗೆ ಮಿತಿಗೊಳಿಸಲಾಗಿದೆ. ಮಾರುಕಟ್ಟೆ ಧಾರಣೆ ಪ್ರತಿ ಕ್ವಿಂಟಲ್‌ಗೆ ೧ ಸಾವಿರದ ೬೦೦ ರೂಪಾಯಿ ಅಥವಾ ಅದಕ್ಕಿಂತ ಕಡಿಮೆ ದರದಲ್ಲಿ ಮಾರಾಟವಾದರೆ, ಪ್ರತಿ ಕ್ವಿಂಟಲ್‌ಗೆ ಗರಿಷ್ಠ ೨೫೦ ರೂಪಾಯಿಂತೆ ಪಾವತಿಸಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ದಾವಣಗೆರೆ ದಕ್ಷಿಣ ವಿಧಾನಸಭಾ ಮತ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರು ನೋಂದಾಯಿಸಲು ಇದೇ ೧೮ರವರೆಗೆ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಅರ್ಹರು ತಮ್ಮ ವ್ಯಾಪ್ತಿಯ ಮತಗಟ್ಟೆ ಮಟ್ಟದ ಅಧಿಕಾರಿಯನ್ನು ಸಂಪರ್ಕಿಸುವಂತೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಹೆಸರು ತಿದ್ದುಪಡಿ, ವರ್ಗಾವಣೆ ಹಾಗೂ ಹೆಸರು ತೆಗೆದು ಹಾಕಲು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಹ ಮತದಾರರು ತಮ್ಮ ಮೊಬೈಲ್‌ನಲ್ಲಿ 'ವೋಟರ್ ಹೆಲ್ಪ್ ಲೈನ್' ಆಪ್ ಡೌನ್‌ಲೋಡ್ ಮಾಡಿಕೊಂಡು ಅಗತ್ಯ ದಾಖಲೆಗಳೊಂದಿಗೆ ಮತಗಟ್ಟೆ ಮಟ್ಟದ ಅಧಿಕಾರಿಗೆ ಅರ್ಜಿ ಸಲ್ಲಿಸಬಹುದು ಎಂದು ಹೇಳಿದ್ದಾರೆ.

**<><*<><>*><>**

ಸಮಾಜದ ಏಳ್ಗೆಗೆ ಎಲ್ಲರೂ ಒಗ್ಗಟ್ಟಾಗಿ ಚಿಂತನ-ಮಂಥನ ಮಾಡುವುದು ಅತ್ಯವಶ್ಯಕವಾಗಿದೆ ಎಂದು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷರು, ಶಾಸಕ ಪ್ರಸಾದ ಅಬ್ಬಯ್ಯ ತಿಳಿಸಿದ್ದಾರೆ. ಹುಬ್ಬಳ್ಳಿ-ಧಾರವಾಡ ಪೂರ್ವ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ನಂ ೬೩ರ ಬಾನಿ ಓಣಿಯಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಅನುದಾನದಡಿ ೩ ಕೋಟಿ ವೆಚ್ಚದಲ್ಲಿ ಸಮುದಾಯ ಭವನ ನಿರ್ಮಾಣ ಹಾಗೂ ಸಾರ್ವಜನಿಕ ಶೌಚಾಲಯ, ಯುಜಿಡಿ ಲೈನ್, ಚರಂಡಿ ಮತ್ತು ಕಾಂಕ್ರೀಟ್ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಶಿಕ್ಷಣದಿಂದ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ. ಹಾಗಾಗಿ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

<><*<><>*><>

ಕರ್ನಾಟಕದ ದಕ್ಷಿಣ ಭಾಗದಿಂದ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಸೈನಿಕಶಾಲೆಗೆ ಸೇರ್ಪಡೆಯಾಗಲು ಪರೀಕ್ಷಾ ಮಾರ್ಗದರ್ಶಿ ಶಿಬಿರಗಳು ಹೆಚ್ಚಾಗಬೇಕೆಂದು ಸ್ವಾಮಿ ವಿವೇಕಾನಂದ ಯೂತ್ ಮೂವ್ ಮೆಂಟ್ ನ ಸಹಾಯಕ ಮುಖ್ಯಕಾರ್ಯನಿರ್ವಹಣಾಧಿಕಾರಿ ಪ್ರವೀಣ್ ಕುಮಾರ್ ಎಸ್. ಅಭಿಪ್ರಾಯಪಟ್ಟಿದ್ದಾರೆ. ಮಡಿಕೇರಿಯಲ್ಲಿ ಆಯೋಜಿಸಲಾಗಿದ್ದ ಸೈನಿಕಶಾಲಾ ಪ್ರವೇಶ ಪರೀಕ್ಷಾ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಸೈನಿಕ ಶಾಲೆಗೆ ಸೇರ್ಪಡೆಯಾಗಬೇಕೆಂಬುದು ಅನೇಕ ವಿದ್ಯಾರ್ಥಿಗಳು, ಪೋಷಕರ ಆಸೆಯಾಗಿರುತ್ತದೆ. ಆದರೆ ಈ ನಿಟ್ಟಿನಲ್ಲಿ ಸೂಕ್ತವಾದ ಪರೀಕ್ಷಾ ಮಾರ್ಗದರ್ಶನ ಮತ್ತು ತರಬೇತಿಯ ಕೊರತೆ ಕಾಡುತ್ತಿದೆ. ಕೇವಲ ವಿದ್ಯಾರ್ಥಿಗಳು ಮಾತ್ರ ಸೈನಿಕ ಶಾಲಾ ಸೇರ್ಪಡೆ ನಿಟ್ಟಿನಲ್ಲಿ ಪ್ರಯತ್ನಿಸಿದರೆ ಸಾಲದು, ಪೋಷಕರು ಕೂಡ ಮಕ್ಕಳಿಗೆ ಅಗತ್ಯ ಸಿದ್ಧತಾ ಸಲಹೆ, ಮಾರ್ಗದರ್ಶನ ನೀಡುವುದು ಮುಖ್ಯ ಎಂದು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**